# APRIL 21, 2026
# AKASHAVANI - DHARWAD
# PRADESH SAAMACHARA (KANNADA) 07.05 A.M

**ಮುಖ್ಯಾಂಶಗಳು**

- **ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಕೆರೆಗಳಿಗೆ ನೀರು ತುಂಬುವ ಯೋಜನೆಗೆ ಇಂದು ಮುಖ್ಯಮಂತ್ರಿ ಚಾಲನೆ.**
- **ಬಸವಣ್ಣನವರ ಅನುಭವ ಮಂಟಪದ ಪರಿಕಲ್ಪನೆ ಇಂದಿನ ಪ್ರಜಾಪ್ರಭುತ್ವಕ್ಕೆ ಅಡಿಪಾಯ – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**
- **ಕೃಷಿಕ ಸಮಾಜವು ರೈತರ ಏಳಿಗೆಗಾಗಿ ಶ್ರಮಿಸುವಂತೆ ಶಾಸಕ ಎನ್.ಎಚ್.ಕೋನರೆಡ್ಡಿ ಮನವಿ.**
- **ಇಂದು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ 17ನೇ ಘಟಿಕೋತ್ಸವ: ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಸೇರಿದಂತೆ ಗಣ್ಯರು ಭಾಗಿ.**

**ಈಗ ವಾರ್ತೆಗಳ ವಿವರ**

<><><>

**ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ** ತಾಲೂಕಿನ ಕೆರೆ ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಕಾರ್ಯಕ್ರಮವು ಗುಂಡ್ಲುಪೇಟೆ ಪಟ್ಟಣದ ಡಿ.ದೇವರಾಜ ಅರಸು ಕ್ರೀಡಾಂಗಣದಲ್ಲಿ ಇಂದು ಬೆಳಗ್ಗೆ 11.30 ಕ್ಕೆ ನಡೆಯಲಿದ್ದು, ಬೃಹತ್ ವೇದಿಕೆ ನಿರ್ಮಿಸಲಾಗಿದೆ. 110 ಕೆರೆಗಳಿಗೆ ನೀರು ತುಂಬುವ ಯೋಜನೆಗೆ ಚಾಲನೆ, ಹತ್ತಿ ಮಾರುಕಟ್ಟೆ, ವಾಲ್ಮೀಕಿ ಭವನ, ಡಾಕ್ಟರ್ ಬಿ.ಆರ್. ಅಂಬೇಡ್ಕರ್ ವಸತಿ ನಿಲಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಕೋವಿಡ್ ಎರಡನೇ ಅವಧಿಯಲ್ಲಿ ಆಮ್ಲಜನಕ ಕೊರತೆಯಿಂದ ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ಅಸುನೀಗಿದ್ದ ಮೃತರ ಕುಟುಂಬಕ್ಕೆ ಖಾಯಂ ಉದ್ಯೋಗ ನೇಮಕಾತಿ ಆದೇಶ ಪತ್ರವನ್ನು ಮುಖ್ಯಮಂತ್ರಿ ನೀಡಲಿದ್ದಾರೆ.

<><><>

**ಬಸವಣ್ಣನವರು ತೋರಿದ ಅನುಭವ ಮಂಟಪ'ದ ಪರಿಕಲ್ಪನೆ ಇಂದಿನ** ಪ್ರಜಾಪ್ರಭುತ್ವಕ್ಕೆ ಅಡಿಪಾಯ. ಸಾರ್ವಜನಿಕ ಬದುಕಿನಲ್ಲಿ ಪಾರದರ್ಶಕತೆ ಮತ್ತು ನೈತಿಕತೆ ಹೇಗಿರಬೇಕು ಎಂಬುದನ್ನು ಅವರ ವಚನಗಳು ಇಂದಿಗೂ ನಮಗೆ ಕಲಿಸುತ್ತವೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ವಿಶ್ವಗುರು ಬಸವಣ್ಣನವರ ಜಯಂತಿಯ ಹಿನ್ನೆಲೆಯಲ್ಲಿ **ಹುಬ್ಬಳ್ಳಿಯ** ಮೂರು ಸಾವಿರ ಮಠದ ಆವರಣದಲ್ಲಿ, ಬಸವ ಜಯಂತಿಯ ಭವ್ಯ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಈ ಮೆರವಣಿಗೆಯು, ಬಸವಣ್ಣನವರ ಕ್ರಾಂತಿಕಾರಿ ವಿಚಾರಗಳನ್ನು ಮನೆಮನಕ್ಕೆ ತಲುಪಿಸುವ ಸಂಕೇತವಾಗಿದೆ. 'ನುಡಿದಂತೆ ನಡೆಯಬೇಕು' ಎಂಬ ಸರಳ ತತ್ವ, ನಮ್ಮ ದೈನಂದಿನ ಬದುಕಿನ ಭಾಗವಾಗಲಿ. ಜಾತಿ – ಮತಗಳ ಬೇಲಿ ದಾಟಿ ಮನು ್ಯತ್ವವನ್ನು ಗೌರವಿಸುವ ಸಂಕಲ್ಪ ನಮ್ಮದಾಗಲಿ. ನಾವು ಮಾಡುವ ಪ್ರತಿಯೊಂದು ಕೆಲಸವೂ ಸಮಾಜಕ್ಕೆ ಅರ್ಪಿತವಾಗಲಿ ಎಂದರು. ಸಮಾಜದಲ್ಲಿ ಪ್ರತಿಯೊಬ್ಬರೂ ಬಸವಣ್ಣನವರ ಆದರ್ಶ, ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಅನುಸರಿಸುವ ಮೂಲಕ ಶರಣರಿಗೆ ಗೌರವ ಸಲ್ಲಿಸೋಣ ಎಂದು **ಹಾಸನದಲ್ಲಿ** ಸಂಸದ ಶ್ರೇಯಸ್ ಎಂ ಪಟೇಲ್ ತಿಳಿಸಿದ್ದಾರೆ. ಜಗತ್ತಿನ ಮಹಾನ್ ದಾರ್ಶನಿಕ, ಸಮಾಜ ಸುಧಾರಕ ಜಗಜ್ಯೋತಿ ಬಸವಣ್ಣನವರ ತತ್ವಾದರ್ಶಗಳ ತಳಹದಿಯಲ್ಲಿ ಮುನ್ನಡೆಯುವ ಮೂಲಕ ರಾಜ್ಯ ಸರ್ಕಾರ ಬಸವಣ್ಣನವರಿಗೆ ಶ್ರೇ ್ಠ ಗೌರವವನ್ನು ಸಲ್ಲಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ **ಸಚಿವ ಪ್ರಿಯಾಂಕ ಖರ್ಗೆ ಸಾಮಾಜಿಕ** ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ. ನಾಡಿನ ಸಾಂಸ್ಕೃತಿಕ ನಾಯಕ ಬಸವಣ್ಣನವರ ತತ್ವ ಮತ್ತು ಆದರ್ಶಗಳನ್ನು ಅಳವಡಿಸಿಕೊಂಡಲ್ಲಿ ಸಮಾಜದಲ್ಲಿ ಶಾಂತಿ, ಸಹನೆ ಮತ್ತು ಸಹಬಾಳ್ವೆ ನೆಲೆಸುತ್ತದೆ ಎಂದು **ಕೊಡಗು** ಜಿಲ್ಲೆಯ ಕೊಡ್ಲಿಪೇಟೆ ಕಲ್ಲುಮಠದ ಶ್ರೀ ಮಹಾಂತ ಸ್ವಾಮೀಜಿ ಅಭಿಪ್ರಾಯ ಪಟ್ಟಿದ್ದಾರೆ. ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತ್ಯುತ್ಸವ ನಿಮಿತ್ತ **ಕೊಪ್ಪಳದಲ್ಲಿ** ಶ್ರೀ ಬಸವೇಶ್ವರ ಪುತ್ಥಳಿಗೆ ಪು ್ಪ ನಮನ ಸಲ್ಲಿಸಲಾಯಿತು. ಪ್ರಸ್ತುತ ಸನ್ನಿವೇಶದಲ್ಲಿ ಬಸವಣ್ಣನವರ ವಚನ ಸಂದೇಶಗಳು ವಿಶ್ವದ ಎಲ್ಲ ಸಮಸ್ಯೆಗಳಿಗೂ ಪರಿಹಾರ ಸೂಚಿಸುವಂತಿವೆ. ಹಾಗಾಗಿ ಎಲ್ಲರೂ ಬಸವಣ್ಣನವರನ್ನು ಆರಾಧಿಸುವುದಕ್ಕಿಂತ ಅವರ ವಚನ ಸಂದೇಶಗಳನ್ನು ಪಾಲಿಸುವುದು ಇಂದಿನ ದಿನಗಳಲ್ಲಿ ಅಗತ್ಯವಾಗಿದೆ ಎಂದು **ಮಂಡ್ಯ** ಜಿಲ್ಲಾಧಿಕಾರಿ ಡಾಕ್ಟರ್ ಕುಮಾರ ತಿಳಿಸಿದ್ದಾರೆ. ಅನುಭವ ಮಂಟಪದ ಮೂಲಕ ನವ ಸಮಾಜ ನಿರ್ಮಾಣಕ್ಕೆ ಅಡಿಗಲ್ಲು ಹಾಕಿ ಸಮಾಜದ ಎಲ್ಲಾ ವರ್ಗಗಳ ಸುಖ ಶಾಂತಿಗೆ ಮುನ್ನುಡಿ ಬರೆದವರು ಜಗಜ್ಯೋತಿ ಬಸವೇಶ್ವರರು ಎಂದು **ರಾಮನಗರ** ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಬಣ್ಣಿಸಿದ್ದಾರೆ. **ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘವು, ಬಸವ ಜಯಂತಿ** ಅಂಗವಾಗಿ ರಾ.ಹ.ದೇಶಪಾಂಡೆ ಸಭಾಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಅವರ ನೇತೃತ್ವದಲ್ಲಿ, ನಾಡಿನ ಸಾಂಸ್ಕೃತಿಕ ನಾಯಕ 'ಜಗಜ್ಯೋತಿ ಬಸವೇಶ್ವರ' ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ, ಗೌರವ ಸಲ್ಲಿಸಲಾಯಿತು. ವಚನಗಳನ್ನು ಸರಿಯಾದ ರೀತಿಯಲ್ಲಿ ಅರ್ಥೈಸಿಕೊಂಡು ಬದುಕು ರೂಪಿಸಿಕೊಂಡಾಗ ಶರಣರು ಸಾರಿದ ವಚನಗಳು ಸಾರ್ಥಕವನ್ನು ಪಡೆದುಕೊಳ್ಳುತ್ತವೆ. ಕೇವಲ ವರ್ಷಕ್ಕೊಂದು ಸಾರಿ ಬಸವಣ್ಣನವರನ್ನು ನೆನೆಪಿಸಿಕೊಳ್ಳುವುದ್ದಕ್ಕಿಂತ ದಿನನಿತ್ಯದ ಬದುಕಿನಲ್ಲಿ ಅವರ ವಚನಗಳನ್ನು ಅಳವಡಿಸಿಕೊಳ್ಳುವುದು ಸೂಕ್ತ ಎಂದು ಸಂಘದ ಕಾರ್ಯಾಧ್ಯಕ್ಷ ಬಸವಪ್ರಭು ಹೊಸಕೇರಿ ಹೇಳಿದರು.

<><><>

**ಕೃಷಿಕ ಸಮಾಜವು ದೇಶದ ಬೆನ್ನೆಲುಬಾದ** ರೈತರ ಏಳಿಗೆಗಾಗಿ ಶ್ರಮಿಸಬೇಕು ಎಂದು ಶಾಸಕ ಎನ್.ಎಚ್.ಕೋನರೆಡ್ಡಿ ಹೇಳಿದ್ದಾರೆ. ನವಲಗುಂದ ವಿಧಾನಸಭಾ ಕ್ಷೇತ್ರದ ಅಣ್ಣಿಗೇರಿ ನಗರದಲ್ಲಿ ಅಣ್ಣಿಗೇರಿ ತಾಲ್ಲೂಕು ಕೃಷಿಕ ಸಮಾಜಕ್ಕೆ, ಸರ್ಕಾರದಿಂದ ಮಂಜೂರಾದ ಜಮೀನಿನಲ್ಲಿ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ

ನೆರವೇರಿಸಿ ಅವರು ಮಾತನಾಡಿದರು. ಅಣ್ಣಿಗೇರಿ, ನವಲಗುಂದ ಹಾಗೂ ಹುಬ್ಬಳ್ಳಿಯಲ್ಲಿ ಒಟ್ಟು ಮೂರು ಕಡೆಗಳಲ್ಲಿ ಸುಮಾರು 1 ಕೋಟಿ ರೂಪಾಯಿ ವೆಚ್ಚದಲ್ಲಿ ಕೃಷಿಕ ಸಮಾಜದ ಕಟ್ಟಡಗಳನ್ನು ನಿರ್ಮಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

**<><><>**

**ಇಂದು ಅದ್ವೈತ ಸಿದ್ಧಾಂತ ಪ್ರತಿಪಾದಕರಾದ ಶ್ರೀ ಶಂಕರಚಾರ್ಯರ ಜಯಂತಿ.** ಜಯಂತಿ ಅಂಗವಾಗಿ ಶಂಕರಚಾರ್ಯ ಸ್ಥಾಪಿತ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಶಾರದಾ ಪೀಠದಲ್ಲಿ ಹಲವು ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಶ್ರೀ ವಿಧುಶೇಖರ ತೀರ್ಥ ಸ್ವಾಮೀಜಿ ಅವರ ನೇತೃತ್ವದಲ್ಲಿ ಮಠದಲ್ಲಿ ವಿಶೇಷ ಪೂಜೆ ಶ್ಲೋಕ ಪಠಣೆ, ಶಂಕರ ಬೆಟ್ಟದಲ್ಲಿರುವ ಶಂಕರ್ಚಾರ್ಯರ ಪ್ರತಿಮೆಗೆ ವಿಶೇಷ ಪೂಜೆ ಹಾಗೂ ನಾಳೆ ಶೃಂಗೇರಿಯಲ್ಲಿ ಮಹಾ ರಥೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. **ಧಾರವಾಡ ಜಿಲ್ಲಾಡಳಿತ ಹಾಗೂ** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ, ತತ್ವಜ್ಞಾನಿಗಳ ದಿನಾಚರಣೆ ಅಂಗವಾಗಿ, ಆದ್ಯ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮವನ್ನು ಇಂದು ಸಂಜೆ 6 ಗಂಟೆಗೆ, ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

**<><><>**

**ಕರ್ನಾಟಕ ರಾಜ್ಯ ಅಕ್ಕಮಹಾದೇವಿ** ಮಹಿಳಾ ವಿಶ್ವವಿದ್ಯಾನಿಲಯದ 17ನೇ ಘಟಿಕೋತ್ಸವ ಇಂದು ಬೆಳಿಗ್ಗೆ 11.30ಕ್ಕೆ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ ಕ್ರೀಡಾಂಗಣದಲ್ಲಿ ವಿಶೇಷವಾಗಿ ನಿರ್ಮಿಸಿರುವ ಸಭಾಂಗಣದಲ್ಲಿ ನಡೆಯಲಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪಾಲ್ಗೊಳ್ಳಲಿದ್ದಾರೆ ಎಂದು ಕುಲಪತಿ ಡಾಕ್ಟರ್ ವಿಜಯಾ ಕೋರಿಶೆಟ್ಟಿ ತಿಳಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ಮುಖ್ಯ ಅತಿಥಿಗಳಾಗಿ ಮುಂಬೈನ ಎಸ್.ಎನ್.ಡಿ.ಟಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊಫೇಸರ್ ಉಜ್ವಲಾ ಚಕ್ರದೇವ್ ಘಟಿಕೋತ್ಸವ ಭಾ ‘ಣ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಎಂ.ಸಿ. ಸುಧಾಕರ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದರು. ಜಾನಪದ ಕ್ಷೇತ್ರದಲ್ಲಿ ಧಾರವಾಡದ ಪಾರ್ವತೆವ್ವ ಸಿದ್ದಪ್ಪ ಹೊಂಗಲ್, ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಕಲಬುರಗಿಯ ಡಾಕ್ಟರ್ ಸಂಗೀತಾ ಎನ್ ಕಟ್ಟಿಮನಿ ಮತ್ತು ಉದ್ಯಮ ಹಾಗೂ ಸಾಮಾಜಿಕ ಸೇವಾ ಕ್ಷೇತ್ರದ ಸಾಧನೆಗಾಗಿ ಬಾಗಲಕೋಟೆ ಜಿಲ್ಲೆಯ ಆಶಾದೇವಿ ಜಗದೀಶ ಗುಡಗುಂಟಿ ಅವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗುವುದು ಎಂದು ಹೇಳಿದರು.

**<><><>**

**ಉತ್ತರಕನ್ನಡ ಜಿಲ್ಲೆ ಹೊನ್ನಾವರ ತಾಲೂಕು** ಕಾಸರಕೋಡ ಕಡಲತೀರಕ್ಕೆ ಸತತ 6ನೇ ಬಾರಿ ಬ್ಲೂ ಫ್ಲ್ಯಾಗ್ ಮಾನ್ಯತೆ ದೊರೆತಿದೆ. ಕಾಸರಕೋಡ ಕಡಲತೀರದಲ್ಲಿ ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕಿ ಮಂಗಳಗೌರಿ ಭಟ್ ಬ್ಲೂ ಫ್ಲ್ಯಾಗ್ ಅನಾವರಣಗೊಳಿಸಿದರು. ಸ್ವಚ್ಛ ಭಾರತ ಅಭಿಯಾನ ಸ್ವಚ್ಛತಾ ಹೀ ಸೇವಾ ಅಭಿಯಾನದಡಿ ಕಾಸರಕೋಡ ಕಡಲ ತೀರದಲ್ಲಿ ಸ್ವಚ್ಛತೆ ಕಾಪಾಡಲು ಕೇಂದ್ರ ಸರ್ಕಾರ ವಿಶೇಷ ಯಂತ್ರಗಳನ್ನು ಒದಗಿಸಿದೆ. ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕಿ, ಮಂಗಳಗೌರಿ ಭಟ್ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

**<><><>**

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ, ಆಕಾಶವಾಣಿಯ, ಬಹುಶ್ರುತ, ಮನ್** ಕಿ ಬಾತ್ ಕಾರ್ಯಕ್ರಮದ, 133 ನೇ ಆವೃತ್ತಿ, ಇದೇ ತಿಂಗಳ 26 ರಂದು ಭಾನುವಾರ, ಬೆಳಗ್ಗೆ 11 ಗಂಟೆಗೆ, ಪ್ರಸಾರವಾಗಲಿದೆ. ಜನತೆ ತಮ್ಮ ಅನಿಸಿಕೆ ಅಭಿಪ್ರಾಯಗಳನ್ನು, ನಮೋ ಆ್ಯಪ್ ಮಾಯ್ ಗಾವ್ ಓಪನ್ ಫೋರಂ ಅಥವಾ ಉಚಿತ ಸಹಾಯವಾಣಿ – 1800–11–7800 ಮೂಲಕ, ಹಂಚಿಕೊಳ್ಳಲು ಇದೇ 24 ಕೊನೆಯ ದಿನವಾಗಿದೆ.

**<><><>**

**ಬೆಂಗಳೂರು ಬಯೋ** ಇನ್ನೋವೇ ‘ನ್ ಕೇಂದ್ರವು, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಇದೇ ತಿಂಗಳ 24 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ನಗರದ ಜೆಸ್ಟ್ ಕ್ಲಬ್‌ನಲ್ಲಿ ರೈತ ಉತ್ಪಾದಕ ಸಂಸ್ಥೆಗಳು ಮತ್ತು ನವೋದ್ಯಮಗಳ ಸಮಾವೇಶ – 2026 ಕಾರ್ಯಕ್ರಮ ಆಯೋಜಿಸಿದೆ.

**<><><>**

**ಮೈಸೂರು ನಗರದಲ್ಲಿ ಮಹಿಳೆಯರ** ಸುರಕ್ಷತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ‘ಅಕ್ಕ ಪಡೆ’ ತಂಡವು ಸಾರ್ವಜನಿಕ ಸ್ಥಳಗಳಲ್ಲಿ ಗಸ್ತು ನಡೆಸಿ ಜಾಗೃತಿ ಕಾರ್ಯಾಚರಣೆ ನಡೆಸಿತು.

**<><><>**

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಕೆರೆಗಳಿಗೆ ನೀರು ತುಂಬುವ ಯೋಜನೆಗೆ ಇಂದು ಮುಖ್ಯಮಂತ್ರಿ ಚಾಲನೆ.**
- **ಬಸವಣ್ಣನವರ ಅನುಭವ ಮಂಟಪದ ಪರಿಕಲ್ಪನೆ ಇಂದಿನ ಪ್ರಜಾಪ್ರಭುತ್ವಕ್ಕೆ ಅಡಿಪಾಯ – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**
- **ಕೃಷಿಕ ಸಮಾಜವು ರೈತರ ಏಳಿಗೆಗಾಗಿ ಶ್ರಮಿಸುವಂತೆ ಶಾಸಕ ಎನ್.ಎಚ್.ಕೋನರೆಡ್ಡಿ ಮನವಿ.**
- **ಇಂದು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ 17ನೇ ಘಟಿಕೋತ್ಸವ; ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಸೇರಿದಂತೆ ಗಣ್ಯರು ಭಾಗಿ.**

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.

<><><>